ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 783

ಸದಸ್ಯರ ಹೆಸರು : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ, (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 25.09.2020

ಕ್ರಸಂ	ಪ್ರಶ್ನೆ	ಉತ್ತರ
ಅ	ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಸರ್ಕಾರ ಒದಗಿಸಿದೆ; (ತಾಲ್ಲೂಕುವಾರು ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಒದಗಿಸಿದ ಫಲಾನುಭವಿಗಳ ತಾಲ್ಲೂಕುವಾರು ವಿವರ ಕೆಳಕಂಡಂತಿದೆ. (see table below) 2019-20ನೇ ಸಾಲಿನ ಬಾಂಡುಗಳು ಮುದ್ರಣದ ಹಂತದಲ್ಲಿದ್ದು, ಅವುಗಳು ಸ್ವೀಕೃತವಾದ ನಂತರ ಫಲಾನುಭವಿಗಳಿಗೆ ವಿತರಿಸಲಾಗುವುದು.
ಆ	ಯೋಜನೆಯ ಫಲಾಭವಿಗಳನ್ನು ಗುರುತಿಸಲು ನಿಗಧಿಪಡಿಸಿರುವ ನಿಯಮಗಳಲ್ಲಿ ಬದಲಾವಣೆ ಮಾಡಲಾಗಿದೆಯೇ; (ವಿವರ ನೀಡುವುದು)	ಭಾಗ್ಯಲಕ್ಷ್ಮಿ ಯೋಜನೆಯಡಿ ದಿನಾಂಕ:24-02-2018ರ ಸರ್ಕಾರದ ಆದೇಶದಲ್ಲಿ ಈ ಕೆಳಕಂಡ ಬದಲಾವಣೆಗಳನ್ನು ತರಲಾಗಿದೆ. 1. ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಪಡೆಯಲು ನೊಂದಣಿ ಮಾಡಲು ಮಗು ಜನಿಸಿದ ಒಂದು ವರ್ಷದೊಳಗೆ ಇರುವ ಅವಧಿಯನ್ನು ಮಗು ಜನಿಸಿದ ಎರಡು ವರ್ಷದವರೆಗೆ ವಿಸ್ತರಿಸಲಾಗಿದೆ. 2. ಎರಡನೇ ಮಗುವನ್ನು ಯೋಜನೆಯಡಿ ನೊಂದಣಿ ಮಾಡುವ ಸಂದರ್ಭದಲ್ಲಿ ಕಡ್ಡಾಯ ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆಗೆ ಒಳಪಡಬೇಕೆಂಬ ಷರತ್ತನ್ನು ಕೈ ಬಿಡಲಾಗಿದೆ.
ಇ	ಭಾಗ್ಯಲಕ್ಷ್ಮಿ ಯೋಜನೆ ಜಾರಿಗಾಗಿ ಮೂರು ವರ್ಷಗಳಲ್ಲಿ ಮೀಸಲಿಟ್ಟ ಮತ್ತು ವೆಚ್ಚ ಮಾಡಿದ ಮೊತ್ತ ಎಷ್ಟು; (ಮಾಹಿತಿ ನೀಡುವುದು)	ಭಾಗ್ಯಲಕ್ಷ್ಮಿ ಯೋಜನೆ ಜಾರಿಗಾಗಿ ಮೂರು ವರ್ಷಗಳಲ್ಲಿ ಮೀಸಲಿಟ್ಟ ಮತ್ತು ವೆಚ್ಚ ಮಾಡಿದ ಮೊತ್ತದ ವಿವರ ಈ ಕೆಳಕಂಡಂತಿದೆ. (see table below)

ತಾಲ್ಲೂಕುಗಳ ಹೆಸರು	ವಿತರಿಸಲಾಗಿರುವ ಬಾಂಡ್ ಸಂಖ್ಯೆ		
	2016-17	2017-18	2018-19
ಬಸವಕಲ್ಯಾಣ	1309	503	1508
ಭಾಲ್ಕಿ	1306	856	1896
ಬೀದರ್	1700	1082	2585
ಹುಮನಾಬಾದ್	1159	371	1414
ಸಂತಪೂರ (ಔ)	992	450	1377

(ರೂ. ಕೋಟಿಗಳಲ್ಲಿ)

ವರ್ಷ	ಮೀಸಲಿಟ್ಟ ಅನುದಾನ	ವೆಚ್ಚವಾದ ಅನುದಾನ
2017-18	321.28	301.93
2018-19	309.43	294.43
2019-20	309.42	294.42

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 99 ಮಮಅ 2020